## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1806 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 23.03.2026 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಉದ್ಯೋಗ ಪಡೆಯಲುಬೇಕಾದ ಕೌಶಲ್ಯ ಹೊಂದಿರುವ ಯುವಜನರ ಸಂಖ್ಯೆ ಎಷ್ಟು; (ವಿವರ ನೀಡುವುದು); | **ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ**<br><br>ಬೆಂಗಳೂರು ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಒಟ್ಟು 43,654 ಅಭ್ಯರ್ಥಿಗಳು ಉದ್ಯೋಗ ಪಡೆಯಲು ನೋಂದಾಯಿಸಿರುತ್ತಾರೆ.<br><br>**ರಾಷ್ಟ್ರೀಯ ಜೀವನೋಪಾಯ ಅಭಿಯಾನ**<br><br>**ದೀನ್ ದಯಾಳ್ ಅಂತ್ಯೋದಯ ನಗರ ಜೀವನೋಪಾಯ ಅಭಿಯಾನ (DAY-NULM)**<br><br>• ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ರವರ ಪತ್ರ ಸಂಖ್ಯೆ:K-12014(21)/1/2018-UPA-I-UD (E-9044566) ದಿನಾಂಕ:03-04-2023ರನ್ವಯ ಡೇ-ಎನ್.ಯು.ಎಲ್.ಎಂ ಅಭಿಯಾನದ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ವಉದ್ಯೋಗ ಉಪಘಟಕವನ್ನು ಮುಕ್ತಾಯಗೊಳಿಸಿ ಆದೇಶಿಸಿರುತ್ತಾರೆ.<br>• ಡೇ-ಎನ್.ಯು.ಎಲ್.ಎಂ ಯೋಜನೆಯು ದಿನಾಂಕ:30-09-2024ರ ಅಂತ್ಯಕ್ಕೆ ಮುಕ್ತಾಯಗೊಂಡಿರುತ್ತದೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯರವರ ಪತ್ರ ಸಂಖ್ಯೆ:K-11013(8)/1/2021-UPA-I-UD-Part(1)/E-9126071 ದಿನಾಂಕ:04-12-2024ರನ್ವಯ ಹೊಸ ಯೋಜನೆಯಾದ ದೀನದಯಾಳ್ ಜನ್ ಅಜೀವಿಕ (ಶಹರಿ) ಯೋಜನೆಯನ್ನು (DJAY-S) ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಅನುಮೋದನೆಯನ್ನು ನೀಡಿರುತ್ತದೆ. ಸದರಿ ಯೋಜನೆಯನ್ನು ದಿನಾಂಕ:30-09-2025ರವರೆಗೆ ಮುಂದುವರೆಸಲಾಗಿರುತ್ತದೆ. ಅದರಂತೆ ಕರಡು ಮಾರ್ಗಸೂಚಿಯು ಮಾತ್ರ ಸ್ವೀಕೃತವಾಗಿದ್ದು, ಹೊಸ ಮಾರ್ಗಸೂಚಿ ಮತ್ತು ಅನುದಾನ ಸ್ವೀಕೃತವಾಗಿರುವುದಿಲ್ಲ.<br><br>**ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)**<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಮೂಲಕ ಈ ಕೆಳಗಿನ ಯೋಜನೆಗಳನ್ನು ಅನುಷ್ಠಾನ- ಗೊಳಿಸಲಾಗುತ್ತಿರುವ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ (DDU-GKY) 2013-14 ರಿಂದ ಇಲ್ಲಿಯವರೆಗೆ ಬೆಂಗಳೂರು ನಗರ ಜಿಲ್ಲೆಯಲ್ಲಿ |

| | |
|---|---|
| | ಉದ್ಯೋಗ ಪಡೆಯಲು ಬೇಕಾದ ಕೌಶಲ್ಯ ಹೊಂದಿದವರ ಸಂಖ್ಯೆ 1946. |
| ಆ) ಬೆಂಗಳೂರು ನಗರ ಉದ್ಯೋಗ ಒದಗಿಸುವಲ್ಲಿ ಮುಂಚೂಣಿಯಲ್ಲಿದೆಯೇ; ಹಾಗಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಎಷ್ಟು ಯುವ ಜನರು ಉದ್ಯೋಗಕ್ಕೆ ನೇಮಕಗೊಂಡಿದ್ದಾರೆ; | **<u>ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ</u>**<br><br>ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ 55 ನೇರ ಸಂದರ್ಶನ/ಮಿನಿ ಉದ್ಯೋಗ ಮೇಳಗಳನ್ನು ಆಯೋಜಿಸಿದ್ದು, ಆ ಮೂಲಕ 1538 ನಿರುದ್ಯೋಗಿ ಯುವಕರಿಗೆ ಉದ್ಯೋಗ ಆಹ್ವಾನ ಪತ್ರ ನೀಡಲಾಗಿದೆ.<br><br>**<u>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ - ( ಕೆ.ಎಸ್.ಡಿ.ಸಿ)</u>**<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಡಿ 8146 ಅಭ್ಯರ್ಥಿಗಳು ತರಬೇತಿ ಪಡೆದಿದ್ದು, ತರಬೇತಿ ಪಡೆದ 267 ಅಭ್ಯರ್ಥಿಗಳು ಉದ್ಯೋಗಾವಕಾಶವನ್ನು ಪಡೆದಿದ್ದು, ನಿಗಮದಿಂದ ಕೈಗೊಳ್ಳಲಾದ ಉದ್ಯೋಗ ಮೇಳದ ಮುಖೇನ ಅಭ್ಯರ್ಥಿಗಳು ಉದ್ಯೋಗಾವಕಾಶ ಪತ್ರಗಳನ್ನು ಪಡೆದಿರುತ್ತಾರೆ.<br><br>ನಿಗಮದಿಂದ ಕೈಗೊಳ್ಳಲಾದ ಉದ್ಯೋಗ ಮೇಳಗಳ ಮುಖೇನ 17511 ಅಭ್ಯರ್ಥಿಗಳು ಉದ್ಯೋಗಾವಕಾಶಕ್ಕಾಗಿ Shortlistಗೊಂಡಿದ್ದು, 10025 ಅಭ್ಯರ್ಥಿಗಳು ಉದ್ಯೋಗವಕಾಶಕ್ಕಾಗಿ ಆಯ್ಕೆಗೊಂಡಿರುತ್ತಾರೆ.<br><br>**<u>ರಾಷ್ಟ್ರೀಯ ಜೀವನೋಪಾಯ ಅಭಿಯಾನ</u>**<br><br>**<u>ದೀನ್ ದಯಾಳ್ ಅಂತ್ಯೋದಯ ನಗರ ಜೀವನೋಪಾಯ ಅಭಿಯಾನ (DAY-NULM)</u>** |
| | • ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ರವರ ಪತ್ರ ಸಂಖ್ಯೆ:K-12014(21)/1/2018-UPA-I-UD (E-9044566) ದಿನಾಂಕ:03-04-2023ರನ್ವಯ ಡೇ-ಎನ್.ಯು.ಎಲ್.ಎಂ ಅಭಿಯಾನದ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ವಳನಿಯುಕ್ತಿ ಉಪಘಟಕವನ್ನು ಮುಕ್ತಾಯಗೊಳಿಸಿ ಆದೇಶಿಸಿರುತ್ತಾರೆ.<br><br>• ಡೇ-ಎನ್.ಯು.ಎಲ್.ಎಂ ಯೋಜನೆಯು ದಿನಾಂಕ:30-09-2024ರ ಅಂತ್ಯಕ್ಕೆ ಮುಕ್ತಾಯಗೊಂಡಿರುತ್ತದೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯರವರ ಪತ್ರ ಸಂಖ್ಯೆ:K-11013(8)/1/2021-UPA-I-UD-Part(1)/E-9126071 ದಿನಾಂಕ:04-12-2024ರನ್ವಯ ಹೊಸ ಯೋಜನೆಯಾದ ದೀನದಯಾಳ್ ಜನ್ ಅಜೀವಿಕ (ಶಹರಿ) ಯೋಜನೆಯನ್ನು (DJAY-S) ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಅನುಮೋದನೆಯನ್ನು ನೀಡಿರುತ್ತದೆ. ಸದರಿ ಯೋಜನೆಯನ್ನು ದಿನಾಂಕ:30-09-2025ರವರೆಗೆ ಮುಂದುವರೆಸಲಾಗಿರುತ್ತದೆ. ಅದರಂತೆ ಕರಡು ಮಾರ್ಗಸೂಚಿಯು ಮಾತ್ರ ಸ್ವೀಕೃತವಾಗಿದ್ದು, ಹೊಸ ಮಾರ್ಗಸೂಚಿ ಮತ್ತು ಅನುದಾನ ಸ್ವೀಕೃತವಾಗಿರುವುದಿಲ್ಲ. |

**<u>ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)</u>**

ಡಿಡಿಯು-ಜಿಕೆವೈ ಕಾರ್ಯಕ್ರಮದಡಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಉದ್ಯೋಗಕ್ಕೆ ನೇಮಕಗೊಂಡಿರುವ ಯುವಜನರ ವಿವರ ಈ ಕೆಳಕಂಡಂತಿದೆ.

| ವರ್ಷ | 2022-23 | 2023-24 | 2024-25 | ಒಟ್ಟು |
|---|---|---|---|---|
| ಉದ್ಯೋಗಕ್ಕೆ ನೇಮಕಗೊಂಡ ಅಭ್ಯರ್ಥಿಗಳ ಸಂಖ್ಯೆ | 598 | 367 | 756 | 1721 |

ಇ) ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ ಸಂಖ್ಯಾ ಕೌಶಲ್ಯ ವಿಮರ್ಶಾತ್ಮಕ ಚಿಂತನ (Critical thinking) ಕೌಶಲ್ಯಗಳಲ್ಲಿ ರಾಜ್ಯ ಇತರ ರಾಜ್ಯಗಳಿಗಿಂತ ಹಿಂದುಳಿಯಲು ಕಾರಣವೇನು;

**<u>ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ</u>**

2025ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಇಂಗ್ಲೀಷ್ ಭಾಷೆ ಮತ್ತು ಸಂವಹನ ಕೌಶಲ್ಯ ತರಬೇತಿಯನ್ನು ಖಾಸಗಿ ಸಂಸ್ಥೆಯ ಮುಖಾಂತರ ನೀಡಲಾಗಿರುತ್ತದೆ.

ರಾಜ್ಯದಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಭಾರತ ಸರ್ಕಾರ ರೂಪಿಸಿರುವಂತೆ Employability Skill ವಿಷಯದಡಿ ಇಂಗ್ಲೀಷ್ ಭಾಷೆ ಮತ್ತು ಸಂವಹನ ಕೌಶಲ್ಯ, ಕಂಪ್ಯೂಟರ್ ಕೌಶಲ್ಯ ತರಬೇತಿ ನೀಡಲಾಗುತ್ತಿದ್ದು ಮತ್ತು ಸಂಖ್ಯಾ ಕೌಶಲ್ಯ ವಿಮರ್ಶಾತ್ಮಕ ಚಿಂತನೆ (Critical thinking)ಯನ್ನು ಕಾರ್ಯಾಗಾರ ಲೆಕ್ಕಚಾರ ಮತ್ತು ವಿಜ್ಞಾನ ಹಾಗೂ ಇಂಜಿನಿಯರಿಂಗ್ ರೇಖಾಚಿತ್ರ ಪಠ್ಯಕ್ರಮದಲ್ಲಿ ಅಳವಡಿಸಿ ಬೋಧಿಸಲಾಗುತ್ತಿದೆ.

**<u>ರಾಷ್ಟ್ರೀಯ ಜೀವನೋಪಾಯ ಅಭಿಯಾನ</u>**

**<u>ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)</u>**

ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯ ತರಬೇತಿ ಕಾರ್ಯಕ್ರಮದ ಪಠ್ಯಕ್ರಮದ ಅನುಗುಣವಾಗಿ ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ, ಜೀವನ ಕೌಶಲ್ಯ, ಸಂಖ್ಯಾ ಕೌಶಲ್ಯ, ವಿಮರ್ಶಾತ್ಮಕ ಚಿಂತನೆ (Critical thinking) ಕೌಶಲ್ಯಗಳು ಸೇರಿದಂತೆ ತರಬೇತಿಯನ್ನು ನೀಡಲಾಗುತ್ತಿದೆ. ಪ್ರತಿ ಅಭ್ಯರ್ಥಿಗಳಿಗೆ 180 ಗಂಟೆಗಳ ಅವಧಿಯಲ್ಲಿ ಈ ಅವಶ್ಯಕ ವಿಷಯಗಳ ಕುರಿತಾದ ಜ್ಞಾನ ಮತ್ತು ಕೌಶಲ್ಯ ತರಬೇತಿಗಳನ್ನು ಒದಗಿಸಲಾಗುತ್ತಿದೆ.

ಈ) ಕೌಶಲ್ಯಗಳನ್ನು ಸುಧಾರಿಸಿ ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು? (ವಿವರ ನೀಡುವುದು)

**<u>ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ</u>**

ರಾಜ್ಯದಲ್ಲಿ 23 ಸರ್ಕಾರಿ ಐ.ಟಿ.ಐಗಳನ್ನು ಗುರುತಿಸಿ ಇವುಗಳಲ್ಲಿ India AI Data Labಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ – (ಕೆ.ಎಸ್.ಡಿ.ಸಿ)**

ನಿರುದ್ಯೋಗಿಗಳ ಕೌಶಲ್ಯಾಭಿವೃದ್ಧಿಗೊಳಿಸಿ, ಉದ್ಯೋಗಕ್ಕಾಗಿ ಸಜ್ಜುಗೊಳಿಸಲು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. **ಕೌಶಲ್ಯ ನೀತಿ**: ಕೌಶಲ್ಯಾಭಿವೃದ್ಧಿಯ ಪ್ರಕ್ರಿಯೆಗಳನ್ನು ಏಕರೂಪಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಭಾಗಿದಾರರನ್ನು ಒಳಗೊಂಡಂತೆ ನೀತಿಯನ್ನು ರೂಪಿಸಲಾಗಿದೆ.

2. **ಸಿ.ಎಂ.ಕೆ.ಕೆ.ವೈ** 2.0: ಯೋಜನೆಯ ಪರಿಣಾಮಕಾರಿಯಾಗಿ ಹಾಗೂ ತ್ವರಿತವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಯವ್ಯಯ ಘೋಷಣೆಯಂತೆ ಕ್ರಮವಹಿಸಲಾಗುತ್ತಿದೆ.

3. Industry Linkage Cell **ಮತ್ತು** Future Skill: ಯುವಕರಿಗೆ ಭವಿಷ್ಯದ ಕೌಶಲ್ಯ (Future Skills) ತರಬೇತಿಗಳನ್ನು ಕೈಗಾರಿಕಾ ಆಧಾರಿತ ಬೇಡಿಕೆ ಅನುಸಾರ ನೀಡುವುದು ಹಾಗೂ ಉದ್ಯೋಗಾವಕಾಶ ಒದಗಿಸುವುದು.

4. **ಕರ್ನಾಟಕ ಸ್ಕಿಲ್ ಒಲಂಪಿಕ್ಸ್**: ಅಂತರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಹಾಗೂ ರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಪೂರಕವಾಗಿ ಕೌಶಲ್ಯ ಒಲಂಪಿಕ್ಸ್ ಮೂಲಕ ರಾಜ್ಯದ ಯುವ ಜನತೆಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರೇರೇಪಿಸುವುದು.

5. **ವಿದೇಶಿ ಭಾಷಾ ತರಬೇತಿ**: ಅಂತರಾಷ್ಟ್ರೀಯ ಮಟ್ಟದಲ್ಲಿ ವಿವಿಧ ಉದ್ಯೋಗಾವಕಾಶವನ್ನು ಪಡೆಯಲು ಜರ್ಮನ್, ಇಂಗ್ಲೀಷ್, ಸ್ಪ್ಯಾನಿಷ್ ಹಾಗೂ ಇತರ ಭಾಷೆಗಳಲ್ಲಿ ತರಬೇತಿ ನೀಡಲು ಕ್ರಮವಹಿಸಲಾಗುತ್ತಿರುತ್ತದೆ.

6. **ಕಲಿಕೆ ಜೊತೆ ಕೌಶಲ್ಯ**: ಪದವಿ ತರಗತಿಗಳಲ್ಲಿ ಕೌಶಲ್ಯ ಸುಧಾರಿತ ಕಲಿಕೆ ಜೊತೆ ಕೌಶಲ್ಯ ಕಾರ್ಯಕ್ರಮದಡಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ 50 ಗಂಟೆಗಳ ಕೈಗಾರಿಕಾ ಆಧಾರಿತ ತರಬೇತಿ ನೀಡಲಾಗುತ್ತಿದೆ.

7. **ಉದ್ಯೋಗ ಮೇಳ**: ರಾಜ್ಯ ವಿವಿಧ ಜಿಲ್ಲೆಗಳಲ್ಲಿ ಉದ್ಯೋಗ ಮೇಳ ಆಯೋಜಿಸುವ ಮುಖೇನ ಒಂದೇ ವೇದಿಕೆಯಡಿ ಉದ್ಯೋಗದಾತರನ್ನು ಹಾಗೂ ಉದ್ಯೋಗಾಕಾಂಕ್ಷಿಗಳನ್ನು ಒಟ್ಟುಗೂಡಿಸಿ, ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮವಹಿಸಲಾಗಿದೆ.

8. **ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯ ತರಬೇತಿ ಕಾರ್ಯಕ್ರಮ**: ಪ್ರಸಕ್ತ ಸಾಲಿನ ಆಯವ್ಯ ಘೋಷಣೆಯಂತೆ ಅಳಿವಿನಂಚಿನಲ್ಲಿರುವ ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು ಅಗತ್ಯವಿರುವ ಟೂಲ್‌ಕಿಟ್‌ಗಳೊಂದಿಗೆ ಅಲ್ಪಾವಧಿ ತರಬೇತಿಯನ್ನು ನೀಡಲು ಕ್ರಮವಹಿಸಲಾಗಿದೆ.

9. **ಲಂಬಾಣಿ ಜನಾಂಗದ ಕಸೂತಿ ಕಲೆಯ ಕೌಶಲ್ಯ ತರಬೇತಿ ಕಾರ್ಯಕ್ರಮ**: ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯಂತೆ ಲಂಬಾಣಿ ಜನಾಂಗದ ಕಸೂತಿ ಕಲೆಯ ಬಗ್ಗ ತರಬೇತಿಯನ್ನು ಕೌಶಲ್ಯ ತರಬೇತಿ ಕೇಂದ್ರಗಳ ಮುಖೇನ ಅನುಷ್ಠಾನಗೊಳಿಸಲಾಗಿದೆ.

| | |
|---|---|
| | **<u>ರಾಷ್ಟ್ರೀಯ ಜೀವನೋಪಾಯ ಅಭಿಯಾನ</u>**<br><br>**<u>ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ</u>**<br><u>(DAY-NRLM)</u><br><br>ರಾಜ್ಯದಲ್ಲಿ ಡಿಡಿಯು-ಜಿಕೆವೈ ಕಾರ್ಯಕ್ರಮದಡಿ ಒದಗಿಸಲಾಗುವ ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಎಲ್ಲಾ ಹಂತಗಳಲ್ಲೂ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚಟುವಟಿಕೆಯನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ.<br><br>ಮುಂದುವರೆದು, ಯೋಜನೆಯಡಿ CXO-Alumini Meet ಆಯೋಜನೆ ಮತ್ತು ಉತ್ತಮ ಅಭ್ಯಾಸಗಳ ಪ್ರಕಟಣೆ, IEC ಚಟುವಟಿಕೆಗಳು ಹಾಗೂ ಆಸಕ್ತ ಯುವಜನರೊಂದಿಗೆ ಸಂವಾದ ಮುಂತಾದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ಕೌಶಲ್ಯ ಸುಧಾರಣೆಗೆ ನಿರಂತರ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಕೌಉಜೀಇ 16 ಕೌಗುಪ್ರ 2026

**(ಡಾ. ಶರಣಪ್ರಕಾಶ ಆರ್ ಪಾಟೀಲ್)**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.

## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1723 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 23.03.2026 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಧಾನಮಂತ್ರಿ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ಅನುದಾನದಡಿ ಎಷ್ಟು ಫಲಾನುಭವಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲಾಗಿದೆ; ಈ ತರಬೇತಿಗೆ ಎಷ್ಟು ಖರ್ಚು ಮಾಡಲಾಗಿದೆ; ಸಂಪೂರ್ಣ ಮಾಹಿತಿ ನೀಡುವುದು? | ಪ್ರಧಾನಮಂತ್ರಿ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಒಟ್ಟು ಅನುದಾನ ರೂ.45,46,81,135/-ಗಳಾಗಿರುತ್ತದೆ.<br><br>ಈ ಅನುದಾನದಡಿ 37611 ಅಭ್ಯರ್ಥಿಗಳಿಗೆ ತರಬೇತಿ ನೀಡಲು ನೋಂದಾಯಿಸಲಾಗಿತ್ತು. ಅದರಲ್ಲಿ ಒಟ್ಟು 34146 ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಿ, 28476 ಅಭ್ಯರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ನೀಡಲಾಗಿರುತ್ತದೆ. ಅದರಲ್ಲಿ 1107 ಅಭ್ಯರ್ಥಿಗಳಿಗೆ ಉದ್ಯೋಗ ದೊರೆತಿರುತ್ತದೆ.<br><br>ಈ ತರಬೇತಿಗೆ ಒಟ್ಟು ರೂ. 34,87,70,036/-ಗಳು ವೆಚ್ಚವಾಗಿರುತ್ತದೆ. |

**ಸಂಖ್ಯೆ:** ಕೌಉಜೀಇ 17 ಕೌಗುಪ್ರ 2026

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.